**Akashvani : Bangalore**
**Regional Bulletin In Kannada**
**06.09.2024 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.09.2024** **18.40 hrs**

**<><*<><>*><>**

**ಮುಖ್ಯಾಂಶಗಳು**

**<><*<><>*><>**

**೧. ೩೦೦ ಮೆಗಾವ್ಯಾಟ್ ಸೌರ ವಿದ್ಯುತ್ ಖರೀದಿಗೆ ಸರ್ಕಾರದ ಒಪ್ಪಂದ**

**೨. ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಿಂದ ರೈತರಿಗೆ ಅನುಕೂಲ - ಸಚಿವ ಶಿವಾನಂದ ಪಾಟೀಲ್**

**೩. ಮಂಗಳೂರಿನಲ್ಲಿ ಇಂದು ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ಗೆ ಚಾಲನೆ**

**೪. ಗಣೇಶ ಚತುರ್ಥಿಗೆ ರಾಜ್ಯಾದ್ಯಂತ ವ್ಯಾಪಕ ಸಿದ್ಧತೆ; ಪರಿಸರ ಸ್ನೇಹಿ ಹಬ್ಬ ಆಚರಣೆಗೆ ಸರ್ಕಾರದ ಮನವಿ**

**<><*<><>*><>**

೩೦೦ ಮೆಗಾವ್ಯಾಟ್ ಸೌರ ವಿದ್ಯುತ್ ಖರೀದಿ ಒಪ್ಪಂದಕ್ಕೆ ಸಹಿ ಹಾಕಲಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಪಾವಗಢದ ಸೋಲಾರ್ ಪಾರ್ಕ್‌ನಲ್ಲಿ ೩೦೦ ಮೆಗಾವ್ಯಾಟ್ ಸೌರಯೋಜನೆ ಸಂಬಂಧ ವಿದ್ಯುತ್ ಸರಬರಾಜು ಕಂಪನಿ ನಿಯಮಿತದೊಂದಿಗೆ ಜಿಎಸ್‌ಡಬ್ಲ್ಯು ಎನರ್ಜಿಯ ಅಂಗಸಂಸ್ಥೆಯೊಂದಿಗೆ ಖರೀದಿ ಒಪ್ಪಂದಕ್ಕೆ ಮುದ್ರೆ ಹಾಕಲಾಗಿದೆ ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸರ್ಕಾರ ಹಸಿರು ಇಂಧನ ಉಪಕ್ರಮಗಳಿಗೆ ಒತ್ತು ನೀಡಿದ್ದು, ಇದರಿಂದ ದೊಡ್ಡ ಪ್ರಮಾಣದಲ್ಲಿ ಹೂಡಿಕೆಯಾಗುತ್ತಿದೆ ಎಂದು ಅವರು ಹೇಳಿದರು. ನವೀಕರಿಸಬಹುದಾದ ಇಂಧನ ನೀತಿಯನ್ನು ೨೦೦೯ ರಲ್ಲೇ ಜಾರಿಗೊಳಿಸಿದ ದಕ್ಷಿಣ ಭಾರತದ ಮೊದಲ ರಾಜ್ಯ ಎಂಬ ಕೀರ್ತಿಗೆ ಕರ್ನಾಟಕ ಭಾಜನವಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

**<><*<><>*><>**

ಎತ್ತಿನಹೊಳೆ ಎರಡನೇ ಹಂತದ ಸಮಗ್ರ ಕಾಮಗಾರಿ ೨೦೨೭ರ ವೇಳೆಗೆ ಪೂರ್ಣಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಮೊದಲನೇ ಹಂತವನ್ನು ಹಾಸನ ಜಿಲ್ಲೆಯಲ್ಲಿಂದು ಉದ್ಘಾಟಿಸಿ ಅವರು ಮಾತನಾಡಿದರು.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಹಾಸನ, ಚಿಕ್ಕಮಗಳೂರು ಸೇರಿದಂತೆ ಬರಪೀಡಿತ ಏಳು ಜಿಲ್ಲೆಗಳ ೨೯ ತಾಲೂಕಿನ ೭೫ ಲಕ್ಷಕ್ಕೂ ಹೆಚ್ಚು ಜನರಿಗೆ ಇದರಿಂದ ಕುಡಿಯುವ ನೀರು ಪೂರೈಕೆಯಾಗಲಿದೆ ಎಂದು ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ರಾಜಣ್ಣ, ಎಂ.ಬಿ.ಪಾಟೀಲ್, ಡಾ.ಜಿ.ಪರಮೇಶ್ವರ್, ಕೆ.ಜೆ. ಜಾರ್ಜ್ ಮೊದಲಾದವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

**<><*<><>*><>**

ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಿಂದ ರೈತರಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಏಕಕಾಲದಲ್ಲಿ ನಾಲ್ಕು ಬೆಳೆಗಳನ್ನು ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಖರೀದಿಸಲಾಗುತ್ತಿದೆ ಎಂದರು. ಹೆಸರುಕಾಳು, ಸೂರ್ಯಕಾಂತಿ, ಸೋಯಾಬಿನ್ ಮತ್ತು ಉದ್ದಿನಕಾಳನ್ನು ಬೆಂಬಲ ಬೆಲೆ ಯೋಜನೆ ಅಡಿ ಖರೀದಿಸಲಾಗುತ್ತಿದೆ. ಈಗಾಗಲೇ ಹೆಸರುಕಾಳು ಮತ್ತು ಸೂರ್ಯಕಾಂತಿಯನ್ನು ಬೆಂಬಲ ಬೆಲೆಯಲ್ಲಿ ಖರೀದಿಗಾಗಿ ಖರೀದಿ ಏಜನ್ಸಿಗಳನ್ನು ನೇಮಿಸಲಾಗಿದೆ. ಪ್ರತಿ ರೈತರಿಂದ ಗರಿಷ್ಠ ೧೫ ಕ್ವಿಂಟಲ್ ಸೂರ್ಯಕಾಂತಿ ಮತ್ತು ೧೦ ಕ್ವಿಂಟಲ್ ಹೆಸರುಕಾಳು ಖರೀದಿಸಲಾಗುವುದು. ಬೆಂಬಲ ಬೆಲೆಯಲ್ಲಿ ಸುಮಾರು ೧೦ ಲಕ್ಷ ಕ್ವಿಂಟಲ್ ಸೋಯಾಬಿನ್ ಮತ್ತು ೨ ಲಕ್ಷ ಕ್ವಿಂಟಲ್ ಉದ್ದಿನಕಾಳು ಖರೀದಿಸಲಾಗುವುದು ಎಂದರು. ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಲ್ ಹೆಸರುಕಾಳಿಗೆ ೮ ಸಾವಿರದ ೬೮೨ ರೂಪಾಯಿ ಹಾಗೂ ಸೂರ್ಯಕಾಂತಿಗೆ ೭ ಸಾವಿರದ ೨೮೦ ರೂಪಾಯಿ ನಿಗದಿಪಡಿಸಲಾಗಿದೆ. ಹೆಸರುಕಾಳು ಖರೀದಿಗೆ ೧೭೨ ಖರೀದಿ ಕೇಂದ್ರ ಗುರುತಿಸಲಾಗಿದ್ದು, ಈಗಾಗಲೇ ೧ ಸಾವಿರದ ೯೮೨ ರೈತರು ಹಾಗೂ ಸೂರ್ಯಕಾಂತಿ ಖರೀದಿಗೆ ೧೯ ಖರೀದಿ ಕೇಂದ್ರ ಗುರುತಿಸಲಾಗಿದ್ದು, ೪೬೧ ರೈತರು ನೋಂದಾಯಿಸಿಕೊಂಡಿದ್ದಾರೆ. ಎಂದು ಮಾಹಿತಿ ನೀಡಿದರು. ಎಪಿಎಂಸಿ ಯಾರ್ಡ್ ಗಳಲ್ಲಿ ೧೫೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೪ರಿಂದ ೧೫ ಶೀತಲ ಗೃಹಗಳನ್ನು ಎಪಿಎಂಸಿಗಳಲ್ಲಿ ನಿರ್ಮಿಸಲಾಗುವುದು. ರಾಜ್ಯದ ನಾಲ್ಕು ಕಂದಾಯ ವಿಭಾಗಗಳಲ್ಲಿ ವಿಭಾಗಾವಾರು ವಿಜಿಲೆನ್ಸ್ ಘಟಕ ರಚಿಸಲಾಗಿದ್ದು, ಇದರಿಂದ ಎಪಿಎಂಸಿ ಆದಾಯ ಹೆಚ್ಚಾಗಿದೆ, ಈ ವರ್ಷ ೩೮೦ರಿಂದ ೪೦೦ ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿದ್ದು, ಆರ್ಥಿಕ ವರ್ಷದ ೫ ತಿಂಗಳಲ್ಲಿ ೧೩೩ ಕೋಟಿ ರೂಪಾಯಿ ಆದಾಯ ಸಂಗ್ರಹವಾಗಿದೆ ಎಂದು ಸಚಿವರು ಹೇಳಿದರು.

<><*<><>*><>

ಮಂಗಳೂರಿನಲ್ಲಿ ಇಂದಿನಿಂದ ಆರಂಭವಾದ ಮೂರು ದಿನಗಳ ಅಂತಾರಾಷ್ಟ್ರೀಯ ಕರಾಟೆ ಚಾಂಪಿಯನ್‌ಶಿಪ್‌ಗೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಕರಾಟೆ ಸ್ಪರ್ಧೆ ಆಯೋಜಿಸುವ ಮೂಲಕ ಕರಾವಳಿ ಸಂಸ್ಕೃತಿ ಮತ್ತು ಪರಂಪರೆಯನ್ನು ವಿಶ್ವಮಟ್ಟದಲ್ಲಿ ಪರಿಚಯಿಸುವ ಪ್ರಯತ್ನ ನಡೆದಿದೆ. ಇಂತಹ ಕಾರ್ಯಕ್ರಮಗಳು ಹೆಚ್ಚಾಗಬೇಕು ಎಂದರು. ವಿದ್ಯಾರ್ಥಿಗಳಲ್ಲಿ ಉತ್ತಮ ವ್ಯಕ್ತಿತ್ವ ರೂಪಿಸಲು ಕ್ರೀಡೆ ಸಹಕಾರಿಯಾಗಿದೆ. ಮಕ್ಕಳಲ್ಲಿ ಕ್ರೀಡಾ ಚಟುವಟಿಕೆ ಬೆಳೆಸಲು ಪೋಷಕರು ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

<><*<><>*><>

ನಾಡಿನಾದ್ಯಂತ ಗೌರಿ-ಗಣೇಶ ಹಬ್ಬದ ಅಂಗವಾಗಿ ಇಂದು ಸ್ವರ್ಣಗೌರಿ ವ್ರತವನ್ನು ಜನತೆ ಶ್ರದ್ಧಾಭಕ್ತಿ ಸಂಭ್ರಮಗಳಿಂದ ಆಚರಿಸುತ್ತಿದ್ದಾರೆ. ದೇವಾಲಯಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮನೆಗಳನ್ನು ತಳಿರು ತೋರಣಗಳಿಂದ ಸಿಂಗರಿಸಲಾಗುತ್ತಿದ್ದು, ಮಂಟಪದಲ್ಲಿ ಗೌರಿಯ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿ, ಸುಮಂಗಲಿಯರಿಗೆ ಬಾಗಿನ ನೀಡುವುದು ಹಬ್ಬದ ಪ್ರಮುಖ ಆಚರಣೆಯಾಗಿದೆ. ದೊಡ್ಡಬಳ್ಳಾಪುರದ ಬಸವಣ್ಣ ದೇವಾಲಯದಲ್ಲಿ ಗೌರಿ ಮೂರ್ತಿ ಪ್ರತಿಷ್ಠಾಪಿಸಿ ಸುಮಂಗಲಿಯರು ಆರತಿ ಬೆಳಗಿ, ಬಾಗಿನ ಸಮರ್ಪಿಸಿದರು. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಇಂದು ಗೌರಿ ಹಬ್ಬವನ್ನು ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ನಾಳಿನ ಗಣೇಶ ಚತುರ್ಥಿಯನ್ನು ಪರಿಸರ ಸ್ನೇಹಿಯಾಗಿ ಆಚರಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ. ಬಾಗಲಕೋಟೆಯಲ್ಲಿ ಗಣೇಶ ಪ್ರತಿಷ್ಠಾಪನೆಯ ಮೊದಲನೇ ದಿನ ಹಾಗೂ ಐದನೇ ದಿನ ಗಣೇಶ ಮೂರ್ತಿ ವಿಸರ್ಜನೆಗೆ ಸಂಚಾರಿ ತೊಟ್ಟಿಗಳ ವ್ಯವಸ್ಥೆ ಮಾಡಲಾಗಿದೆ ಎಂದು ರಾಜ್ಯ ಪರಿಸರ ಮತ್ತು ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ತಿಳಿಸಿದ್ದಾರೆ. ಕೊಡಗು ಜಿಲ್ಲೆಯಲ್ಲಿ ಪರಿಸರ ಸ್ನೇಹಿ ಮಣ್ಣಿನ ಗಣೇಶ ಮೂರ್ತಿ ಬಳಕೆಗೆ ಜಾಗೃತಿ ಅಭಿಯಾನ ನಡೆಯುತ್ತಿದೆ. ರಾಜ್ಯಾದ್ಯಂತ ನಾಳಿನ ಗಣೇಶ ಚತುರ್ಥಿಗೆ ಸಿದ್ಧತೆ ನಡೆಯುತ್ತಿದ್ದು, ಮಾರುಕಟ್ಟೆಯಲ್ಲಿ ಹಣ್ಣು, ಹೂವು, ಪೂಜಾ ಸಾಮಗ್ರಿ ಖರೀದಿ ಸಾಮಾನ್ಯವಾಗಿದೆ.

ಈ ನಡುವೆ, ರಾಜ್ಯದ ಎಲ್ಲ ಸ್ಥಳೀಯ ಸಂಸ್ಥೆಗಳು ಹಾಗೂ ಜಿಲ್ಲಾಡಳಿತ ಪರಿಸರ ಸ್ನೇಹಿ ಗಣೇಶೋತ್ಸವ ಆಚರಿಸುವಂತೆ ಸಾರ್ವಜನಿಕರಿಗೆ ಮನವಿ ಮಾಡಿವೆ. ನಾಡಿನ ಜನತೆಗೆ ಗೌರಿ-ಗಣೇಶ ಹಬ್ಬ ಸುಖ, ಶಾಂತಿ, ಸಮೃದ್ಧಿ, ನೆಮ್ಮದಿ ತರಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕ, ಸಚಿವರು, ಗಣ್ಯರು ಶುಭ ಹಾರೈಸಿದ್ದಾರೆ.

<><*<><>*><>

ವಿದ್ಯುತ್ ಮಗ್ಗ ಮತ್ತು ಮಗ್ಗಪೂರ್ವ ಘಟಕಗಳ ವಿದ್ಯುತ್ ಸಬ್ಸಿಡಿ ಮಿತಿಯನ್ನು ನೇಕಾರರಿಗೆ ಅನುಕೂಲವಾಗುವಂತೆ ಸರ್ಕಾರ ಮಾರ್ಪಡಿಸಿದೆ ಎಂದು ಜವಳಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದರಿಂದ ಪ್ರತಿ ನೇಕಾರರಿಗೆ ವಾರ್ಷಿಕ ಕನಿಷ್ಠ ೪೦ ಸಾವಿರ ರೂಪಾಯಿ ಉಳಿತಾಯವಾಗಲಿದೆ. ೧೦.೧ ಎಚ್.ಪಿ ಯಿಂದ ೨೦ ಎಚ್.ಪಿ ವರೆಗಿನ ವಿದ್ಯುತ್ ಮಗ್ಗ ಮತ್ತು ಮಗ್ಗಪೂರ್ವ ಘಟಕಗಳು ಬಳಕೆ ಮಾಡುವ ಪೂರ್ಣ ವಿದ್ಯುತ್‌ಗೆ ಸಬ್ಸಿಡಿ ನೀಡಲಿದ್ದು, ನೇಕಾರರು ಪ್ರತಿ ಯೂನಿಟ್‌ಗೆ ೧ ರೂಪಾಯಿ ೨೫ ಪೈಸೆ ಮಾತ್ರ ಪಾವತಿಸಬೇಕು ಎಂದರು. ಸರ್ಕಾರ ನೇಕಾರರ ಬೇಡಿಕೆಗೆ ಸ್ಪಂದಿಸಿ ೫೦೦ ಯೂನಿಟ್ ಮಿತಿ ರದ್ದುಪಡಿಸಿದೆ. ಈ ಕ್ರಮದಿಂದ ಸರ್ಕಾರಕ್ಕೆ ವಾರ್ಷಿಕ ೧೭ ಕೋಟಿ ರೂಪಾಯಿ ಹೊರೆಯಾಗಲಿದೆ ಎಂದು ತಿಳಿಸಿದರು.

<><*<><>*><>

ಇದೇ ೧೫ ರಂದು ಪ್ರಜಾಪ್ರಭುತ್ವ ದಿನವನ್ನು ರಾಜ್ಯಾದ್ಯಂತ ವಿಶೇಷವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ. ಧಾರವಾಡದಲ್ಲಿಂದು ನಡೆದ ಈ ಕುರಿತ ಪೂರ್ವಭಾವಿ ಸಭೆಯಲ್ಲಿ ಅವರು ಮಾತಾನಾಡಿದರು. ಬೀದರ್‌ನಿಂದ ಚಾಮರಾಜನಗರದವರೆಗೆ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಮಾನವ ಸರಪಳಿ ನಿರ್ಮಿಸಲಾಗುವುದು. ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸಾಕಷ್ಟು ಗಟ್ಟಿಗೊಳಿಸಲು, ನಂಬಿಕೆ, ವಿಶ್ವಾಸಾರ್ಹತೆ ಹೆಚ್ಚಿಸಲು ಎಲ್ಲ ವರ್ಗದ ಜನರು ಇದರಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

<><*<><>*><>

ರಾಜ್ಯದಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನ ಬಹಳ ದೊಡ್ಡ ಮಟ್ಟದಲ್ಲಿ ನಡೆಸಲಾಗಿದೆ ಎಂದು ಬಿಜೆಪಿ ರಾಜಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ೨ ರಂದು ಪ್ರಧಾನಿ ನರೇಂದ್ರ ಮೋದಿ ಅವರು, ದೆಹಲಿಯಲ್ಲಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿದ್ದರು. ರಾಜ್ಯದಲ್ಲಿ ಇದನ್ನು ಯಶಸ್ವಿಗೊಳಿಸಲು ಹಿರಿಯ ನಾಯಕರು ಪ್ರವಾಸ ಹಮ್ಮಿಕೊಂಡಿದ್ದಾರೆ ಎಂದರು.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು

೧. ಕೇಂದ್ರ ಪ್ರಸ್ತುತ ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಇದೇ ೧೪ ರಿಂದ ಅಕ್ಟೋಬರ್ ೧ರವರೆಗೆ ಸ್ವಚ್ಛತಾ ಸೇವೆ ಕಾರ್ಯಕ್ರಮ ಹಮ್ಮಿಕೊಳ್ಳಲು ನಿಧರಿಸಲಾಗಿದೆ ಎಂದು ತುಮಕೂರು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ತಿಳಿಸಿದ್ದಾರೆ.

೨. ಇದೇ ೧೯ ರಂದು ಕಲಬುರಗಿಯಲ್ಲಿ ಸಂಪುಟು ಸಭೆ ನಡೆಯಲಿದೆ ಎಂದು ಸಂಪುಟದ ಜಂಟಿ ಕಾರ್ಯದರ್ಶಿ ಆರ್.ಚಂದ್ರಶೇಖರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

೩. ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷ ಪಿ.ಎಂ.ನರೇಂದ್ರ ಸ್ವಾಮಿ ನೇತೃತ್ವದ ಸಮಿತಿ, ಇದೇ ೧೯ ರಿಂದ ೨೧ ರವರೆಗೆ ಕಲಬುರಗಿ ವಿಭಾಗದ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದೆ ಎಂದು ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಾಮಾನ...

ರಾಜ್ಯದಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ಕರಾವಳಿ ಹಾಗೂ ಉತ್ತರ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಮಳೆಯಾಗಿದೆ. ಸಿದ್ದಾಪುರ, ಧರ್ಮಸ್ಥಳ ತಲಾ ೫, ಕಾರ್ಕಳ, ಬಾಗಮಂಡಲ ತಲಾ ೪, ಪುತ್ತೂರು, ಜೇವರ್ಗಿ, ಕಮ್ಮರಡಿ ೩, ಗೇರುಸೊಪ್ಪ, ಕದ್ರಾ, ಪಣಂಬೂರು, ಕಿರವತ್ತಿ, ಕುಂದಾಪುರದಲ್ಲಿ ತಲಾ ೧ ಸೆಂಟಿಮೀಟರ್ ಮಳೆಯಾಗಿದೆ. ಮುನ್ಸೂಚನೆಯಂತೆ ಮುಂದಿನ ಒಂದು ವಾರದ ಕಾಲ ರಾಜ್ಯದ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗಲಿದೆ. ಬೆಂಗಳೂರು ಸುತ್ತಮುತ್ತ ಸಾಮಾನ್ಯ ಮೋಡಕವಿದ ವಾತಾವರಣ. ಆಗಾಗ ಹಗುರ ಮಳೆ. ಗರಿಷ್ಠ ೧೮ ಕನಿಷ್ಠ ೧೦ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**